**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 726/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.02**

**ದಿನಾಂಕಃ 08.10.2025** **ಸಿಡಬ್ಲ್ಯೂ.02**

| | |
|---|---|
| ಹೆಸರು | ಸುಭಾಷ್ |
| ತಂದೆ ಹೆಸರು | ಶಿವಾಜಪ್ಪ |
| ವಯಸ್ಸು | 32 ವರ್ಷ |
| ಉದ್ಯೋಗ | ಬಾರ್ ವೆಂಡರ್ ಕೆಲಸ |
| ವಾಸ ಸ್ಥಳ | ದಾವಣಗೆರೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.3 ರವರ ಪರಿಚಯವಿದೆ. ಆರೋಪಿ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಶೋಧನಾ ಸಮುಚಿತ ಆಧಾರ ಆಗಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.1 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಮಾಲು ಪಟ್ಟಿಯಾಗಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.3 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಮಾದರಿ ಮೊಹರಿನ ನಕಲು ಆಗಿದ್ದು ಅದನ್ನು ಈಗಾಗಲೇ ನಿಪಿ.4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.4 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಸುಮಾರು 1 ವರ್ಷದ ಹಿಂದೆ ಠಾಣೆಯಲ್ಲಿ ಮಾಡಿರುತ್ತೇನೆ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 21.03.2023 ರಂದು ನನಗೆ ಮತ್ತು ಚಾಸಾ.3 ರವರಿಗೆ ಪೊಲೀಸರು ಪ್ರಕರಣದ ವಿಧ್ಯಮಾನ ತಿಳಿಸಿ ಪಂಚರಾಗಿ ಸಹಕರಿಸಿ ಎಂದು ಕೇಳಿಕೊಂಡು ನೋಟಿಸ್ ನೀಡಿದ್ದರು ಎಂದರೆ ಸರಿಯಲ್ಲ. ಹರಿಹರ ಶಿವಮೊಗ್ಗ ರಾಜ್ಯ ಹೆದ್ದಾರಿಯ ಬೆಳ್ಳೂಡಿ ಗ್ರಾಮದ ಹತ್ತಿರದ ರಸ್ತೆಯಲ್ಲಿ ಪೊಲೀಸರು ನಮ್ಮೊಂದಿಗೆ ಆರೋಪಿಯ ಮೇಲೆ ದಾಳಿ ಮಾಡಿ ಆರೋಪಿ ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಮಧ್ಯವನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ ವಾಹನ ಸಂಖ್ಯೆ ಕೆಎ/17 ಡಬ್ಲು 4239 ನೇ ಟಿವಿಎಸ್ ಬೈಕನಲ್ಲಿ 90 ಮಿಲಿಯ 140 ಮಧ್ಯದ ಟೆಟ್ರಾ ಪ್ಯಾಕೆಟಗಳನ್ನು ಸಾಗಾಟ ಮಾಡುತ್ತಿದ್ದನು ಎಂದರೆ ಸರಿಯಲ್ಲ. ಸದರಿ ಮಧ್ಯವನ್ನು ಪೊಲೀಸರು ನಮ್ಮ ಸಮಕ್ಷಮ ಪಂಚನಾಮೆ ಜರುಗಿಸಿ ಜಪ್ತು ಪಡಿಸಿಕೊಂಡು ಅವುಗಳಲ್ಲಿ 30 ಟೆಟ್ರಾ ಪ್ಯಾಕಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಎಂದು ಪ್ರತ್ಯೇಕವಾಗಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆಗ ನನ್ನ ಹಾಗೂ ಚಾಸಾ.3 ರವರ ಸಮಕ್ಷಮ ನಿಪಿ.1 ರಂತೆ ಶೋಧನಾ ಸಮುಚಿತ ಆಧಾರ ತಯಾರಿಸಿ, ಸ್ಥಳದಲ್ಲಿ ನಿಪಿ.2 ರಂತೆ ಪಂಚನಾಮೆ ಜರುಗಿಸಿ ಮಾಲನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಕಾಲಕ್ಕೆ ನಿಪಿ.3 ರಂತೆ ಮಾಲು ಪಟ್ಟಿ ತಯಾರಿಸಿ ನಿಪಿ.4 ರಂತೆ ಮಾದರಿ ಮೊಹರಿನ ನಕಲನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಬೆಳಿಗ್ಗೆ 11.45 ರಿಂದ 12.45 ರವರೆಗೆ ನನ್ನ ಹಾಗೂ ಚಾಸಾ.3 ರವರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಪ್ರಕರಣದ ಎಲ್ಲಾ ವಿಚಾರ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ .**

**ಮರುವಿಚಾರಣೆಃ ಇಲ್ಲ.**

**(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)**

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ